ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(10)

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 21/1/21

# ಅಧಿಕಾರಿಗಳಿಗೆ ಗ್ರಾಮ ವಾಸ್ತವ್ಯ ಕಡ್ಡಾಯ

21/1/21

ಸಂ.ಕ. ಸಮಾಚಾರ, ಬೆಂಗಳೂರು

ಗ್ರಾಮವಾಸ್ತವ್ಯದ ಮೂಲಕ ಹಳ್ಳಿಗಾಡಿನ ಜನರ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಬೇಕೆಂದು ಮುಖ್ಯಮಂತ್ರಿ ಯಡಿಯೂರಪ್ಪ ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದಾರೆ.

ವಿಧಾನಸೌಧದಲ್ಲಿ ಬುಧವಾರ ನಡೆದ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಮ್ಮೇಳನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಮ ರಾಜ್ಯದ ಮೂಲಕ ರಾಮರಾಜ್ಯ ಸ್ಥಾಪನೆ ನಮ್ಮ ಗುರಿಯಾಗಿದ್ದು ಜಿಲ್ಲಾಡಳಿತ ಸದಾ ಗ್ರಾಮಮುಖಿಯಾಗಿರಬೇಕು. ಆ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳಿಂದ ಗ್ರಾಮಲೆಕ್ಕಿಗರವರೆಗೆ ಎಲ್ಲ ಅಧಿಕಾರಿಗಳು ನಿಗದಿತ ದಿನಗಳಂದು ಗ್ರಾಮಗಳಿಗೆ ಕಡ್ಡಾಯವಾಗಿ ಭೇಟಿ ನೀಡಿ ಹಳ್ಳಿಗರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸಲು ಕ್ರಮ ಕೈಗೊಳ್ಳಬೇಕೆಂದು ತಾಕೀತು ಮಾಡಿದ ಮುಖ್ಯಮಂತ್ರಿಗಳು, ಸರ್ಕಾರದ ಸೇವೆ, ಸೌಲಭ್ಯಗಳು ಜನರಿಗೆ ಸಮರ್ಪಕವಾಗಿ ತಲುಪುವುದನ್ನು ಖಾತರಿಪಡಿಸಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



"ಸರ್ಕಾರದ ಅನುದಾನ ಬಿಡುಗಡೆ ಮತ್ತು ವೆಚ್ಚದ ಕುರಿತ ಮಾಹಿತಿಯನ್ನು ಬೆರಳತುದಿಯಲ್ಲೇ ಒದಗಿಸುವ 'ಅವಲೋಕನ ತಂತ್ರಾಂಶ' ವನ್ನು ಲೋಕಾರ್ಪಣೆಗೊಳಿಸಲಾಗಿದೆ. 39 ಇಲಾಖೆಗಳ 1800 ಯೋಜನೆಗಳಿಗಾಗಿ ಅನುಷ್ಠಾನಾಧಿಕಾರಿಗಳಿಗೆ ಬಿಡುಗಡೆ ಮಾಡಲಾದ ಹಣ-ವೆಚ್ಚದ ವಿವರ ಈ ತಂತ್ರಾಂಶದಲ್ಲಿ ಲಭ್ಯವಾಗಲಿದ್ದು ಪಾರದರ್ಶಕತೆಗೆ ಇಟ್ಟ ಹೆಜ್ಜೆಯಾಗಿದೆ.

■ ಬಿ.ಎಸ್.ಯಡಿಯೂರಪ್ಪ। ಮುಖ್ಯಮಂತ್ರಿ

ಗ್ರಾಮ ಸ್ವರಾಜ್ಯ ಮಹಾತ್ಮಾಗಾಂಧೀಜಿ ಅವರ ಕನಸಾಗಿತ್ತು. ಆ ಕನಸನ್ನು ನನಸು ಮಾಡಬೇಕಿದೆ. ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಸಮಸ್ಯೆಗಳು ಇತ್ಯರ್ಥವಾದರೆ ರಾಜಧಾನಿಗೆ ಸಮಸ್ಯೆಗಳನ್ನಿಟ್ಟುಕೊಂಡು ಬರುವವರ ಸಂಖ್ಯೆ ಸಹಜವಾಗಿಯೇ ಕಡಿಮೆಯಾಗುತ್ತದೆ. ಹಾಗಾಗಿ ತಳಮಟ್ಟದ ಆಡಳಿತ ಸದಾ ಸ್ಪಂದನಶೀಲವಾಗಿರುವಂತೆ ನೋಡಿಕೊಳ್ಳಬೇಕೆಂದು ಮುಖ್ಯಮಂತ್ರಿಗಳು ತಾಕೀತು ಮಾಡಿದರು.

ಹಳ್ಳಿಗಾಡಿನ ಕುಡಿಯುವ ನೀರು, ಸ್ವಚ್ಛತೆ, ಜಮೀನಿನ ದಾಖಲೆಗಳಿಗೆ ಸಂಬಂಧಿಸಿದ ತೊಡಕುಗಳು, ಪಿಂಚಣಿ ಸಮಸ್ಯೆ ಮತ್ತಿತರ ಸಮಸ್ಯೆಗಳನ್ನು ನಿವಾರಿಸಲು ತ್ವರಿತ ಕ್ರಮ ಕೈಗೊಂಡು ಜನರು ನೆಮ್ಮದಿಯಿಂದ ಬದುಕಲು ಅನುವು ಮಾಡಿಕೊಡಬೇಕೆಂದು ಸೂಚಿಸಿದರು.